ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 245

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ

ಉತ್ತರಿಸುವ ದಿನಾಂಕ : 22.09.2020

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಪೌರಾಡಳಿತ ಸಂಸ್ಥೆಗಳ ಚುನಾವಣೆಗಳನ್ನು ಯಾವ ವರ್ಷದಲ್ಲಿ ನಡೆಸಲಾಯಿತು;	ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ವಾರ್ಡುಗಳಿಗೆ ಸೆಪ್ಟೆಂಬರ್ 2018 ಮತ್ತು ಅಕ್ಟೋಬರ್ 2018 ರಲ್ಲಿ ಚುನಾವಣೆಗಳನ್ನು ರಾಜ್ಯ ಚುನಾವಣಾ ಆಯೋಗದಿಂದ ನಡೆಸಲಾಯಿತು.
ಆ)	ಸದಸ್ಯರ ಚುನಾವಣೆಯಾದ ನಂತರ ಇಲ್ಲಿಯವರೆಗೂ ಸದರಿ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಆಗದಿರುವುದಕ್ಕೆ ಕಾರಣಗಳೇನು;	ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 9 ನೇ ಅವಧಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿಯನ್ನು ಸಂಖ್ಯೆ:ನಅಇ 82 ಎಂಎಲ್ಆರ್ 2018(1)(2)(3), ದಿನಾಂಕ 03.09.2018 ರಲ್ಲಿ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿತ್ತು. ಈ ಮೀಸಲಾತಿ ಅಧಿಸೂಚನೆಗಳನ್ನು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು/ಧಾರವಾಡ/ಕಲಬುರಗಿ ಇಲ್ಲಿ ಪ್ರಶ್ನಿಸಿದ್ದು, ಧಾರವಾಡ ಪೀಠವು ರಿಟ್ ಅರ್ಜಿ ಸಂಖ್ಯೆ:105750-754/2018 ಹಾಗೂ ಇತರೇ ಪ್ರಕರಣಗಳಲ್ಲಿ ದಿನಾಂಕ 10.09.2018 ರಂದು ತಡೆಯಾಜ್ಞೆ ನೀಡಲಾಗಿತ್ತು. ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿ, ತಡೆಯಾಜ್ಞೆ ಇದ್ದುದ್ದರಿಂದ ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ಸಾಧ್ಯವಾಗಿರುವುದಿಲ್ಲ. ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್

		ಅರ್ಜಿ ಸಂಖ್ಯೆ:47171/2018 c/w ಇತರೇ ಪ್ರಕರಣಗಳಲ್ಲಿ ನ್ಯಾಯಾಲಯವು ದಿನಾಂಕ 18.01.2019 ರಂದು ನೀಡಲಾದ ತೀರ್ಪಿನಲ್ಲಿ ರಿಟ್ ಅರ್ಜಿಯನ್ನು ವಜಾಗೊಳಿಸಿರುತ್ತದೆ. ಸದರಿ ತೀರ್ಪನ್ನು ಪ್ರಶ್ನಿಸಿ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:157-176/2019 c/w ಇತರೇ ಪ್ರಕರಣಗಳನ್ನು ದಾಖಲಿಸಿದ್ದು, ಈ ಪ್ರಕರಣವು ಅಂತಿಮವಾಗಿ ದಿನಾಂಕ 07.11.2019 ರಂದು ವಿಚಾರಣೆಗೆ ಬಂದು ಪ್ರಕರಣವನ್ನು ವಿಲೇವಾರಿ ಮಾಡಿರುತ್ತದೆ. ಆ ಪ್ರಕಾರ ದಿನಾಂಕ 03.09.2018 ರ ಅಧಿಸೂಚನೆಯನ್ನು ದಿನಾಂಕ 06.02.2020 ರಂದು ಹಿಂಪಡೆಯಲಾಗಿದೆ. ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ:2356/2020 ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ 26.02.2020 ರಂದು ವಿಚಾರಣೆ ನಡೆಸಿ, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮಾರ್ಗಸೂಚಿಗಳನ್ನು ಅನುಸರಿಸಿ ಹೊಸದಾಗಿ ಮೀಸಲಾತಿ ಅಧಿಸೂಚನೆಗಳನ್ನು ಹೊರಡಿಸಲು ಕೈಗೊಂಡಿರುವ ಕ್ರಮದ ಬಗ್ಗೆ ದಾಖಲೆಗಳನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸುವಂತೆ, ಅಲ್ಲಿಯವರೆಗೆ ಮೀಸಲಾತಿ ಅಧಿಸೂಚನೆಗಳನ್ನು ಹೊರಡಿಸಬಾರದೆಂದು ನ್ಯಾಯಾಲಯದಿಂದ ನಿರ್ದೇಶನ ನೀಡಲಾಗಿತ್ತು. ತದನಂತರ, ಈ ಪ್ರಕರಣವು ದಿನಾಂಕ 10.03.2020 ರಂದು ಇತ್ಯರ್ಥಗೊಂಡಿದ್ದು, ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 9 ನೇ ಅವಧಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿ ಅಧಿಸೂಚನೆಗಳನ್ನು ದಿನಾಂಕ 11.03.2020 ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:5999/2020 c/w ಇತರೇ ಪ್ರಕರಣಗಳಲ್ಲಿ ಅರ್ಜಿದಾರರು ದಿನಾಂಕ 06.02.2020 ಮತ್ತು 11.03.2020 ರ ಅಧಿಸೂಚನೆಗಳನ್ನು ಪ್ರಶ್ನಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:17.03.2020 ರಂದು ವಿಚಾರಣೆ ನಡೆಸಿ, ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

		"List these matters on 01.04.2020, till then, the official respondents are hereby directed not to precipitate in filling of the posts of President and Vice President of City Municipal Council, Town Municipal and Town Panchayath Council, pursuant to 06.02.2020 and 11.03.2020 notifications". ಈ ಪ್ರಕರಣದಲ್ಲಿ ದಿನಾಂಕ 18.08.2020 ರಂದು ವಿಚಾರಣೆ ನಡೆಸಿದ ನ್ಯಾಯಾಲಯವು ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ಮೀಸಲಾತಿ ನಿಗದಿಪಡಿಸುವ ಪ್ರಕ್ರಿಯೆಯನ್ನು ದಿನಾಂಕ 02.10.2020 ರೊಳಗೆ ಪೂರ್ಣಗೊಳಿಸಲು ನಿರ್ದೇಶನ ನೀಡಿ, ವಿಚಾರಣೆಯನ್ನು ದಿನಾಂಕ 06.10.2020 ಕ್ಕೆ ಮುಂದೂಡಲಾಗಿದೆ. ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ನಿಗದಿಪಡಿಸಲಾದ ಮೀಸಲಾತಿ ಅಧಿಸೂಚನೆಗಳು ನ್ಯಾಯಾಲಯದಲ್ಲಿ ಪ್ರಶ್ನಿತವಾಗಿದ್ದು, ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇರುವುದರಿಂದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ಸಾಧ್ಯವಾಗಿರುವುದಿಲ್ಲ.
ಇ)	ಪೌರಾಡಳಿತ ಸಂಸ್ಥೆಗಳ ಚುನಾವಣೆಯಾಗಿದ್ದರೂ, ವರ್ಷಗಟ್ಟಲೆ ಅಧ್ಯಕ್ಷ, ಉಪಾಧ್ಯಕ್ಷರ ನೇಮಕಾತಿಯಾಗದೇ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;	ಗಮನಕ್ಕೆ ಬಂದಿರುತ್ತದೆ. ನಗರ ಸ್ಥಳೀಯ ಸಂಸ್ಥೆಗಳ ದಿನನಿತ್ಯದ ಕೆಲಸ-ಕಾರ್ಯಗಳಿಗೆ ತೊಂದರೆಯಾಗದಂತೆ ದೈನಂದಿನ ಕಾರ್ಯ-ನಿರ್ವಹಣೆಗಾಗಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಸ್ಥಾನಗಳಿಗೆ ಚುನಾವಣೆ ನಡೆಯುವವರೆಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964 ರ ಕಲಂ-315 ರನ್ವಯ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.
ಈ)	ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಯ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ತಿ	ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಹಾಗೂ ಸಚಿವ ಸಂಪುಟದ ಅನುಮೋದನೆಯನ್ವಯ ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 9 ನೇ ಅವಧಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ

	ಮಾಡಲಾಗುವುದು ? (ವಿವರ ನೀಡುವುದು)	ಮೀಸಲಾತಿ ನಿಗದಿಪಡಿಸಲು ಮಾರ್ಗಸೂಚಿಗಳನ್ನು ಪರಿಷ್ಕರಿಸಿ, ದಿನಾಂಕ 11.09.2020 ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ. ಸದರಿ ಮಾರ್ಗಸೂಚಿಗಳನ್ನು ಆಧರಿಸಿ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 9 ನೇ ಅವಧಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ಮೀಸಲಾತಿ ಅಧಿಸೂಚನೆಗಳನ್ನು ಪ್ರಕಟಿಸಲು ಶೀಘ್ರದಲ್ಲಿಯೇ ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: ನಅಇ/27/ಎಲ್‌ಸಿಕ್ಯೂ/2020

(ನಾರಾಯಣ ಗೌಡ)

ಮಾನ್ಯ ಪೌರಾಡಳಿತ, ತೋಟಗಾರಿಕೆ

ಹಾಗೂ ರೇಷ್ಮೆ ಸಚಿವರು